ಈ) ಯಾವಾಗ ಮಂಜೂರಾತಿ ನೀಡಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 30 ಹಾಸಿಗೆಗಳ ಆಸ್ಪತ್ರೆಯಾಗಿದೆ. ಈ ಆಸ್ಪತ್ರೆಗೆ ಬರುವ ರೋಗಿಗಳ ಸಂಖ್ಯೆ ಕಡಿಮೆ ಇರುವುದರಿಂದ ಮೇಲ್ದರ್ಜೆಗೇರಿಸಲಾಗಿಲ್ಲ.

ಆ) ದಿನವೊಂದಕ್ಕೆ ಬರುವ ರೋಗಿಗಳ ಸಂಖ್ಯೆ ಸರಾಸರಿ 240 ಹಾಗೂ ದಿನವೊಂದಕ್ಕೆ ಆಗುವ ಹೆರಿಗೆಗಳ ಸಂಖ್ಯೆ ಸುಮಾರು 2-3 ಹಾಗೂ ಒಳರೋಗಿಗಳ ಸಂಬಂಧಿಸಿದಂತೆ 30 ಹಾಸಿಗೆಗಳಲ್ಲಿ ಸರಾಸರಿ 14 ಹಾಸಿಗೆಗಳಲ್ಲಿ ರೋಗಿಗಳು ಇರುವುದರಿಂದ ಈಗಿರುವ ಮೂಲಭೂತ ಸೌಕರ್ಯಗಳು ಸಾಕಾಗುತ್ತಿರುವುದರಿಂದ ಇದನ್ನು ಮೇಲ್ದರ್ಜೆಗೇರಿಸುವ ಅವಶ್ಯಕತೆ ಕಂಡು ಬರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ನಾಗಮಂಗಲ ತಾಲ್ಲೂಕಿನ ಬಿಂಡಿಗನವಿಲೆ ಗ್ರಾಮದಲ್ಲಿ ಹೆರಿಗೆ ಆಸ್ಪತ್ರೆ ಕಟ್ಟಡ

1181 (1401) ಶ್ರೀ ಚಲುವರಾಯ ಸ್ವಾಮಿ ಎನ್. (ನಾಗಮಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗಮಂಗಲ ತಾಲ್ಲೂಕಿನ ಬಿಂಡಿಗನವಿಲೆ ಗ್ರಾಮದಲ್ಲಿ ಹೆರಿಗೆ ಆಸ್ಪತ್ರೆ ಕಟ್ಟಡ ನಿರ್ಮಾಣವಾಗಿ 2 ವರ್ಷ ಕಳೆದಿದ್ದರೂ ಸಾರ್ವಜನಿಕ ಸೇವೆಗೆ ಅನುವು ಮಾಡದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಕೈಗೊಂಡ ಕ್ರಮವೇನು;

ಆ) ನಾಗಮಂಗಲ ಮತ ಕ್ಷೇತ್ರದಲ್ಲಿ ಸರ್ಕಾರಿ ಆಸ್ಪತ್ರೆಯ ವೈದ್ಯಾಧಿಕಾರಿಗಳು ಸರಿಯಾದ ರೀತಿಯಲ್ಲಿ ಕರ್ತವ್ಯ ನಿರ್ವಹಿಸದಿರುವ ಬಗ್ಗೆ ಸರ್ಕಾರದ ಗಮನಕ್ಕೆ ತಂದಿದ್ದು ಹಾಗೂ ಮಂಡ್ಯ ಜಿಲ್ಲಾ ಪಂಚಾಯತ್‌ಯ ಕೆ.ಡಿ.ಪಿ. ಸಭೆಯಲ್ಲಿ ಯೂ ಹಾಗೂ ಈ ತನಕ ಈ ವೈದ್ಯಾಧಿಕಾರಿ ಯಾವುದೇ ಸರ್ಕಾರದ ಸಭೆಗೆ ಹಾಜರಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಕೈಗೊಂಡ ಕ್ರಮವೇನು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೆರಿಗೆ ಆಸ್ಪತ್ರೆಯ ಕಟ್ಟಡದ ಕೆಲಸವು ಪೂರ್ಣವಾಗಿಲ್ಲದೇ ಇರುವುದರಿಂದ ಇಲಾಖೆಗೆ ಇನ್ನೂ ಹಸ್ತಾಂತರಗೊಂಡಿರುವುದಿಲ್ಲ. ಇಲಾಖೆಗೆ ಹಸ್ತಾಂತರಿಸಿದ ನಂತರ, ಸಾರ್ವಜನಿಕರ ಸೇವೆಗೆ ಅನುವು ಮಾಡಿಕೊಡಲು ಕ್ರಮ ಕೈಗೊಳ್ಳಲಾಗುವುದು.

ಆ) ನಾಗಮಂಗಲ ತಾಲ್ಲೂಕು ಆರೋಗ್ಯ ಅಧಿಕಾರಿ ಕೆ.ಡಿ.ಪಿ ಸಭೆಗೆ ಗೈರುಹಾಜರಾಗಿರುವುದಕ್ಕೆ ಸದರಿ ಅಧಿಕಾರಿಗೆ ಕಾರಣ ಕೇಳಿ ನೋಟೀಸ್‌ಗಳನ್ನು ಜಾರಿ ಮಾಡಲಾಗಿದೆ.

ಕೆ.ಆರ್. ಪೇಟೆಯಲ್ಲಿ ಹೆಣ್ಣು ಮಕ್ಕಳ ಪ್ರೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವಕ ಕಾಲೇಜು ಮಂಜೂರಾತಿ

1182 (1414) ಶ್ರೀ ಚಂದ್ರಶೇಖರ್ ಕೆ.ಬಿ. (ಕೆ.ಆರ್. ಪೇಟೆ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೃಷ್ಣರಾಜಪೇಟೆ ಮತಕ್ಷೇತ್ರದಲ್ಲಿ ಟೌನ್ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲಾ ವಿಭಾಗ)ದಲ್ಲಿ 750 ಗಂಡು ಮಕ್ಕಳು ಮತ್ತು 780 ಹೆಣ್ಣು ಮಕ್ಕಳು ವ್ಯಾಸಂಗ

ಮಾಡುತ್ತಿದ್ದು ಹಾಗೂ ಪಿ.ಯು.ಸಿ. ತರಗತಿಯಲ್ಲಿ 600 ವಿದ್ಯಾರ್ಥಿಗಳು ಹಾಗೂ 680 ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಅ) ಹಾಗಿದ್ದಲ್ಲಿ ಹೆಣ್ಣು ಮಕ್ಕಳ ಹಿತದೃಷ್ಟಿಯಿಂದ ಪ್ರತ್ಯೇಕ ಹೆಣ್ಣು ಮಕ್ಕಳ ಪ್ರೌಢಶಾಲೆ ಹಾಗೂ ಮಕ್ಕಳ ಪ್ರೌಢಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲಾಗುವುದೇ;

ಇ) ಈ ಶೈಕ್ಷಣಿಕ ವರ್ಷದಿಂದಲೇ (2002-03) ಇದನ್ನು ಪ್ರಾರಂಭಸಲಾಗುವುದೇ?

ಪೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ವಿದ್ಯಾರ್ಥಿಗಳ ದಾಖಲಾತಿ ತರಗತಿವಾರು ವಿವರ ಕೆಳಕಂಡಂತಿದೆ:-

ತರಗತಿ	ಗಂಡು ಮಕ್ಕಳು	ಹೆಣ್ಣು ಮಕ್ಕಳು	ಒಟ್ಟು
8ನೇ	278	262	540
9ನೇ	233	249	482
10ನೇ	209	190	399
ಒಟ್ಟು	720	701	1421
ಪಿಯುಸಿಯಲ್ಲಿ	678	378	1056

(ದಾಖಲಾತಿ ಇನ್ನೂ ಮುಂದುವರಿದಿದೆ)

ಆ) ಹೆಣ್ಣು ಮಕ್ಕಳ ಪ್ರೌಢಶಾಲೆ ಮತ್ತು ಹೆಣ್ಣು ಮಕ್ಕಳ ಸಂಯುಕ್ತ ಪದವಿ ಪೂರ್ವ ಕಾಲೇಜುಗಳನ್ನು ಪ್ರತ್ಯೇಕವಾಗಿ ಮಂಜೂರು ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿರುವುದಿಲ್ಲ..

ಇ) ಉದ್ಭವಿಸುವುದಿಲ್ಲ.

ಶಿವಮೊಗ್ಗ ವಿಧಾನಸಭಾ ಕ್ಷೇತ್ರದಲ್ಲಿ ಮಾಹಿತಿ ಸಿಂಧು ಯೋಜನೆ

1183 (457) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಾಹಿತಿ ಸಿಂಧು ಯೋಜನೆ ಅಡಿಯಲ್ಲಿ ಕಂಪ್ಯೂಟರ್ ಸರಬರಾಜು ಮಾಡಿದ ಶಾಲೆಗಳ ಸಂಖ್ಯೆ ಎಷ್ಟು?

ಆ) ಈ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣವನ್ನು ಹಾಲಿ ನೀಡಲಾಗುತ್ತಿದೆಯೇ?

ಪೊ।। ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಎಂಟು.

ಆ) ಹೌದು.

ಶಿವಮೊಗ್ಗ ನಗರದಲ್ಲಿ ಕರ್ನಾಟಕ ಗೃಹ ಮಂಡಳಿಯ ಯೋಜನೆಗಳು

1184 (458) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿ ಕರ್ನಾಟಕ ಗೃಹ ಮಂಡಳಿ ವತಿಯಿಂದ ವಿವಿಧ ಯೋಜನೆಗಳ ಅಡಿಯಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ ಮನೆಗಳ ಸಂಖ್ಯೆ ಎಷ್ಟು;